ಕರ್ನಾಟಕ ಸರ್ಕಾರ

ಸಂಖ್ಯೆ : ಗ್ರಾಅಪ/22/ಜೈಅಯೋ/2014

ಕರ್ನಾಟಕ ಸರ್ಕಾರ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು ದಿನಾಂಕ 25.09.2014

ಇಂದ,

ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ,

ಇವರಿಗೆ,

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು,
ಜಿಲ್ಲಾ ಪಂಚಾಯತ್,
ಮೈಸೂರು, ಗದಗ, ಹಾವೇರಿ ಮತ್ತು ಬಾಗಲಕೋಟೆ.

ಮಾನ್ಯರೇ,

ವಿಷಯ : 2014–15ನೇ ಸಾಲಿನಲ್ಲಿ ನೂತನ ಸೌರಬೆಳಕು ಯೋಜನೆಯ ಅನುಷ್ಠಾನಕ್ಕಾಗಿ ಮಾರ್ಗಸೂಚಿಗಳು, ಇ–ಟೆಂಡರ್ ಡ್ಯಾಕ್ಯುಮೆಂಟ್‌ಗಳು ಮತ್ತು ಅನುಷ್ಠಾನ-ವೇಳಾಪಟ್ಟಿಯ ಕುರಿತು.

ಉಲ್ಲೇಖ : 1) ಸರ್ಕಾರಿ ಆದೇಶ ಸಂಖ್ಯೆ : ಗ್ರಾಅಪ/5/ಗ್ರಾಇಂಕಾ 2009 ದಿ. 14.7.2009
2) ಸರ್ಕಾರಿ ಪತ್ರ ಸಂಖ್ಯೆ : ಗ್ರಾಅಪ/23/ಜೈಅಯೋ/2013 ದಿ. 21.10.2013

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಈಗಿರುವ ಸೌರಬೆಳಕು ಯೋಜನೆಯನ್ನು ಇನ್ನೂ ಹೆಚ್ಚಿನ ಪರಿಣಾಮಕಾರಿಯಾಗಿ ಜಾರಿಗೊಳಿಸಲು 2014–15ನೇ ಸಾಲಿನಿಂದ ನೂತನ ಸೌರಬೆಳಕು ಯೋಜನೆಯನ್ನು ಮೈಸೂರು, ಗದಗ, ಹಾವೇರಿ ಮತ್ತು ಬಾಗಲಕೋಟೆ ಜಿಲ್ಲೆಗಳ ಆಯ್ಕೆ ಎರಡು ಗ್ರಾಮಗಳಲ್ಲಿ **ಸ್ಟಾಂಡ್ ಅಲೋನ್ ಬೀದಿ ದೀಪಗಳಿಗೆ ಪರ್ಯಾಯವಾಗಿ ಕೇಂದ್ರೀಕೃತ ಸೌರವಿದ್ಯುತ್ ಘಟಕ ಅಳವಡಿಸಿ ಸಂಪೂರ್ಣ ಸೌರ ಬೀದಿ ದೀಪಗಳ ವಿದ್ಯುತ್ ಗ್ರಾಮವನ್ನಾಗಿ** ಘೋಷಿಸುವ ನಿಟ್ಟಿನಲ್ಲಿ ಯೋಜನೆಯನ್ನು ಜಾರಿಗೊಳಿಸಲು ಸರ್ಕಾರ ಉದ್ದೇಶಿಸಿದೆ. ಸದರಿ ಯೋಜನೆಯ ಅನುಷ್ಠಾನಕ್ಕಾಗಿ ಅನುಸರಿಸಬೇಕಾದ ಮಾರ್ಗಸೂಚಿಗಳಿಗೆ ಆಡಳಿತಾತ್ಮಕ ಮಂಜೂರಾತಿ ನೀಡಿದೆ. ಈ **ಮಾರ್ಗಸೂಚಿಗಳೊಂದಿಗೆ ಅನುಷ್ಠಾನ-ವೇಳಾಪಟ್ಟಿ ಮತ್ತು ಇ-ಟೆಂಡರ್ ಡ್ಯಾಕ್ಯುಮೆಂಟ್‌ಗಳನ್ನು ಈ ಪತ್ರದೊಂದಿಗೆ ಲಗತ್ತಿಸಿದೆ.**

ಆದ್ದರಿಂದ ಆಯ್ದ ಜಿಲ್ಲೆಗಳಲ್ಲಿ 2014–15ನೇ ಸಾಲಿನ ನೂತನ ಸೌರಬೆಳಕು ಯೋಜನೆಯಡಿ ತ್ವರಿತವಾಗಿ ನಿಗದಿಪಡಿಸಿದ ಮಾರ್ಗಸೂಚಿಗಳನ್ವಯ **ಎರಡು ಗ್ರಾಮಗಳನ್ನು ಆಯ್ಕೆ ಮಾಡಿಕೊಂಡು ಅನುಷ್ಠಾನ-ವೇಳಾಪಟ್ಟಿಯ ಪ್ರಕಾರ ಕಾಲಮಿತಿಯಲ್ಲಿ ಯೋಜನೆಯನ್ನು ಯಶಸ್ವಿಯಾಗಿ ನಿಯಮಾನುಸಾರ ಅನುಷ್ಠಾನಗೊಳಿಸಲು ಈ ಮೂಲಕ ಕೋರಲಾಗಿದೆ.**

ಸರ್ಕಾರಕ್ಕೆ ಕಾಲಕಾಲಕ್ಕೆ ಆರ್ಥಿಕ ಮತ್ತು ಭೌತಿಕ ಪ್ರಗತಿ ವರದಿ ಸಲ್ಲಿಸತಕ್ಕದ್ದು. ಈ ಯೋಜನೆಯ ಅನುಷ್ಠಾನದಲ್ಲಿ ಸಮಗ್ರ ಗ್ರಾಮೀಣ ಇಂಧನ ಕಾರ್ಯಕ್ರಮದ ಯೋಜನಾ ಅಭಿಯಂತರರನ್ನು ಸಂಪೂರ್ಣ ಜವಾಬ್ದಾರರನ್ನಾಗಿ ಮಾಡಲಾಗಿರುತ್ತದೆ.

ಮುಂದುವರಿದು ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡದ ಕಾಲೋನಿಗಳಲ್ಲಿ ಹಾಕಲಾದ ಸೌರ ಬೀದಿ ದೀಪಗಳಿಗೆ ಆರ್ಥಿಕ ಮತ್ತು ಭೌತಿಕ ಪ್ರಗತಿ ವಿವರಗಳನ್ನು ಪ್ರತ್ಯೇಕವಾಗಿ ಸಲ್ಲಿಸತಕ್ಕದ್ದು.

ತಮ್ಮ ನಂಬುಗೆಯ,

(ಬೂವನಹಳ್ಳಿ ನಾಗರಾಜ್)
ನಿರ್ದೇಶಕರು (ಗ್ರಾಮೂಸೌ-2) ಮತ್ತು
ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

ಪ್ರತಿಯನ್ನು :

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು
2. ಮಾನ್ಯ ಮುಖ್ಯ ಮಂತ್ರಿಯವರ ಪ್ರಧಾನ ಕಾರ್ಯದರ್ಶಿಯವರು, ವಿಧಾನಸೌಧ, ಬೆಂಗಳೂರು.
3. ಮಾನ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿಯವರು, ವಿಧಾನ ಸೌಧ, ಬೆಂಗಳೂರು.
4. ಮಾನ್ಯ ಸರ್ಕಾರದ ಅಪರ ಕಾರ್ಯದರ್ಶಿ ಮತ್ತು ಅಭಿವೃದ್ಧಿ ಆಯುಕ್ತರು, ವಿಧಾನ ಸೌಧ, ಬೆಂಗಳೂರು.
5. ಮಾನ್ಯ ಗ್ರಾಮೀಣ ಅಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
6. ಮಾನ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ / ಯೋಜನಾ ಇಲಾಖೆ
7. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಗಮ, ನಂ. 39, ಶಾಂತಿ ಗೃಹ, ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್ ಕಟ್ಟಡ, ಅರಮನೆ ರಸ್ತೆ, ಬೆಂಗಳೂರು-01
8. ನಿರ್ದೇಶಕರು, ಪಂಚಾಯತ್ ರಾಜ್ / ನರೇಗಾ / ಸ್ವಉಕಾ / ಗ್ರಾಮ ಸ್ವರಾಜ್ / ಸುಗ್ರಾಯೋ / ಜಿ.ಪಂ.ಶಾಖೆ / ಗ್ರಾಮೀಣ ಅಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
9. ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
10. ಎಲ್ಲಾ ಜಿಲ್ಲೆಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತಗಳು (ಮೈಸೂರು, ಗದಗ, ಹಾವೇರಿ ಮತ್ತು ಬಾಗಲಕೋಟೆಗಳನ್ನು ಹೊರತುಪಡಿಸಿ.)
11. ಎಲ್ಲಾ ಜಿಲ್ಲೆಯ ಮುಖ್ಯ ಲೆಕ್ಕಾಧಿಕಾರಿಗಳು / ಉಪ ಕಾರ್ಯದರ್ಶಿಗಳು (ಅಭಿವೃದ್ಧಿ) ಜಿಲ್ಲಾ ಪಂಚಾಯತ.
12. ಎಲ್ಲಾ ಜಿಲ್ಲೆಯ ಮುಖ್ಯ ಖಜಾನಾಧಿಕಾರಿಗಳು, ಖಜಾನೆ ಇಲಾಖೆ.
13. ಉಪ ನಿರ್ದೇಶಕರು, ನೆಟ್‌ವರ್ಕ್ ಮ್ಯಾನೇಜ್‌ಮೆಂಟ್ ಸೆಂಟರ್, ಖನಿಜ ಭವನ, ಸೌತ್ ಎಂಟ್ರೆನ್ಸ್, ರೇಸ್ ಕೋರ್ಸ್ ರಸ್ತೆ, ಬೆಂಗಳೂರು.
14. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು / ಕಾರ್ಯದರ್ಶಿಗಳು (ಪಂ.ರಾ)ರವರ ಆಪ್ತ ಕಾರ್ಯದರ್ಶಿಗಳು, ಗ್ರಾಮೀಣ ಅಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
15. ರಕ್ಷಾ ಕಡತಕ್ಕೆ / ಹೆಚ್ಚುವರಿ ಪ್ರತಿ.